# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಮಂ.ವಿ./ಪ.ವಿ./ಸಿ.ಆರ್.92/2022-23/ಇ.15

ಕುಲಸಚಿವ (ಪರೀಕ್ಷಾಂಗ)ರ ಕಛೇರಿ,
ಮಂಗಳಗಂಗೋತ್ರಿ - 574 199.
ದಿನಾಂಕ: 22.12.2023

**ಪ್ರಕಟಣೆ**

ವಿಷಯ: ಫೆಬ್ರವರಿ 2024ರಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಕಾರ್ಯಕ್ರಮಗಳ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ ಪರೀಕ್ಷೆಗಳ ಬಗ್ಗೆ.

--------

ಮಂಗಳೂರು ವಿಶ್ವವಿದ್ಯಾನಿಲಯದ 2023-24ನೇ ಶೈಕ್ಷಣಿಕ ವರ್ಷದ ಎಂ.ಎ., ಎಂ.ಎಸ್.ಡಬ್ಲ್ಯು., ಎಂ.ಕಾಂ., ಎಂ.ಕಾಂ.(ಹೆಚ್.ಆರ್.ಡಿ.), ಎಂ.ಕಾಂ.(ಇನ್ಶೂರೆನ್ಸ್ ಆ್ಯಂಡ್ ಬ್ಯಾಂಕ್ ಮ್ಯಾನೇಜ್‌ಮೆಂಟ್), ಎಂ.ಬಿ.ಎ.(ಐ.ಬಿ.), ಎಂ.ಬಿ.ಎ.(ಟಿ.ಟಿ.ಎಂ.) ಹಾಗೂ ಎಂ.ಎಸ್ಸಿ., ಎಂ.ಎ.ಎಸ್.ಎಲ್.ಪಿ., ಎಂ.ಪಿ.ಎಡ್., ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ ಪರೀಕ್ಷೆಗಳು ದಿನಾಂಕ ***09.02.2024*** ರಿಂದ ಪ್ರಾರಂಭವಾಗಲಿರುವುದು ಎಂಬುದನ್ನು ಸಂಬಂಧಪಟ್ಟ ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರು/ಕಾಲೇಜು ಪ್ರಾಂಶುಪಾಲರುಗಳು ಹಾಗೂ ಸದರಿ ಪರೀಕ್ಷೆಗಳಿಗೆ ಹಾಜರಾಗಲಿರುವ ಎಲ್ಲಾ ಅಭ್ಯರ್ಥಿಗಳ ಗಮನಕ್ಕೆ ಈ ಮೂಲಕ ತರಲಾಗಿದೆ.

**ಸೂಚನೆಗಳು:**

1. ಮೇಲಿನ ಸೆಮಿಸ್ಟರ್ ನಿಯಮಿತ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ **UUCMS Portal** ನಲ್ಲಿ ನೋಂದಣಿ ಮಾಡತಕ್ಕದ್ದು. ಹಾಗೂ ಸಂಬಂಧಿಸಿದ ಪರೀಕ್ಷಾ ಶುಲ್ಕವನ್ನು ಕಡ್ಡಾಯವಾಗಿ Online ನಲ್ಲಿಯೇ **UUCMS Portal** ನ ಮುಖಾಂತರ ಪಾವತಿಸತಕ್ಕದ್ದು. ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು. **Offline ಪರೀಕ್ಷಾ ಶುಲ್ಕವನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲು ಸಾಧ್ಯವಾಗುವುದಿಲ್ಲ.**

2. ಪ್ರಥಮ ಮತ್ತು ತೃತೀಯ ಸೆಮಿಸ್ಟರ್ **ಪುನರಾವರ್ತಿತ** ವಿದ್ಯಾರ್ಥಿಗಳು ಪರೀಕ್ಷೆಗಳಿಗೆ ಈ ಕೆಳಗಿನಂತೆ ನೋಂದಾಯಿಸತಕ್ಕದ್ದು.
   - 2021-22ನೇ ಸಾಲಿಗಿಂತ ಮೊದಲು ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಅರ್ಜಿಯನ್ನು MU- VARSITY ಮೂಲಕ ನೋಂದಾಯಿಸಿ, ಪರೀಕ್ಷಾ ಶುಲ್ಕವನ್ನು ಬ್ಯಾಂಕ್ ಚಲನ್ ಮೂಲಕ ಪಾವತಿಸತಕ್ಕದ್ದು.
   - 2021-22 ಹಾಗೂ ನಂತರ ಪ್ರವೇಶಾತಿ ಪಡೆದ **(UUCMS** ಬ್ಯಾಚ್‌ನ) ವಿದ್ಯಾರ್ಥಿಗಳ ಅರ್ಜಿಯನ್ನು **UUCMS Portal** ನಲ್ಲಿ ನೋಂದಾಯಿಸಿ, ಶುಲ್ಕವನ್ನು ಆನ್-ಲೈನ್‌ನಲ್ಲಿಯೇ **UUCMS Portal** ಮೂಲಕ ಪಾವತಿಸತಕ್ಕದ್ದು.

3. ಸವಿವರವಾದ ವೇಳಾಪಟ್ಟಿಯನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು.

4. ***ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಸದ್ರಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಅನರ್ಹರಾಗಿರುವುದಿಲ್ಲ. ಶುಲ್ಕ ಪಾವತಿಸಿದ ರಶೀದಿ/ಚಲನ್‌ನನ್ನು ಪ್ರತ್ಯೇಕವಾಗಿ ಎಲ್ಲಾ ವಿವರಗಳನ್ನೊಳಗೊಂಡ ಮಾಹಿತಿಯೊಂದಿಗೆ ಸಲ್ಲಿಸತಕ್ಕದ್ದು.***

5. ***ಕುಲಸಚಿವರಿಂದ ಪ್ರವೇಶಾತಿ ಅನುಮೋದನೆಯಾಗದ / ಕಡಿಮೆ ಹಾಜರಾತಿ ಇರುವ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.*** **ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾನಿಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ವಿಭಾಗ / ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ವಿಭಾಗ / ಕಾಲೇಜು ಅಥವಾ ವಿಶ್ವವಿದ್ಯಾನಿಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.**

6. ಇನ್ನಿತರ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಿರುವುದರಿಂದ (ವಿಭಾಗ / ಕಾಲೇಜು ಮತ್ತು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿ) ವಿಭಾಗ / ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡಾ ನಿಗದಿತ ಶುಲ್ಕದೊಂದಿಗೆ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು (ಇತರ ವಿದ್ಯಾರ್ಥಿಗಳೊಂದಿಗೆ) ಸಲ್ಲಿಸುವಂತೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು/ ಕಾರ್ಯಕ್ರಮಗಳ ಸಂಯೋಜಕರು ಕಾಲೇಜುಗಳ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.

7. *ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳ ಪರೀಕ್ಷಾ ಹಣಕಾಸು ತಖ್ತೆ ಹಾಗೂ ಪರೀಕ್ಷಾರ್ಥಿಗಳ ಪಟ್ಟಿಯನ್ನು ಅನುಮೋದಿಸಲ್ಪಟ್ಟ ಪ್ರವೇಶಾನುಮೋದನೆ ಪಟ್ಟಿಯಲ್ಲಿ ಸೂಚಿಸಿರುವ ಮಾದರಿಯಲ್ಲಿ ಯಾವುದೇ ಕಾಗುಣಿತ ವ್ಯತ್ಯಾಸವಿಲ್ಲದಂತೆ ದಾಖಲಿಸಬೇಕು.*

8. *ವಿಶ್ವವಿದ್ಯಾನಿಲಯದ ವಿನಿಯಮಾವಳಿ (ರೆಗ್ಯುಲೇಶನ್) ಪ್ರಕಾರ ಪರೀಕ್ಷೆಗೆ ಹಾಜರಾಗಲು ಅರ್ಹತೆಯನ್ನು ಹೊಂದಿದ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ. ವಿಶ್ವವಿದ್ಯಾನಿಲಯದ*

ತಿದ್ದುಪಡಿ ವಿನಿಯಮದ ಪ್ರಕಾರ 2013 ಹಾಗೂ ಅದರ ಹಿಂದಿನ ಸಾಲಿನ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ವಿಶೇಷ ಪರೀಕ್ಷಾ ಶುಲ್ಕವನ್ನು ಪಾವತಿಸಿ, ಪರೀಕ್ಷೆಗಳಿಗೆ ಹಾಜರಾಗಲು ಅರ್ಹರಾಗಿರುತ್ತಾರೆ. ಸದ್ರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು. ಇಲ್ಲವಾದಲ್ಲಿ ವಿಭಾಗ / ಕಾಲೇಜಿನ ಮುಖ್ಯಸ್ಥರೇ ಜವಾಬ್ದಾರರಾಗುವರು.

9. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು (ದಂಡಶುಲ್ಕ ರಹಿತ ಮತ್ತು ದಂಡಶುಲ್ಕ ಸಹಿತ) ಪಾವತಿ ಮಾಡಲು ಈ ಕೆಳಕಂಡ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

**ಪರೀಕ್ಷಾ ಶುಲ್ಕವನ್ನು ಪಾವತಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕ:**

ದಂಡ ಶುಲ್ಕ ರಹಿತ: (ನಿಯಮಿತ ಹಾಗೂ ಪುನರಾವರ್ತಿತ)
ಪ್ರಥಮ ಮತ್ತು ತೃತೀಯ ಸೆಮಿಸ್ಟರ್ — 22.12.2023ರಿಂದ 16.01.2024ರವರೆಗೆ

ದಂಡ ಶುಲ್ಕದೊಂದಿಗೆ : (ದಿನವೊಂದಕ್ಕೆ ರೂ. 290/-ರಂತೆ) (ನಿಯಮಿತ ಹಾಗೂ ಪುನರಾವರ್ತಿತ)
ಪ್ರಥಮ ಮತ್ತು ತೃತೀಯ ಸೆಮಿಸ್ಟರ್ — 17.01.2024ರಿಂದ 22.01.2024ರವರೆಗೆ

10. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ.

11 ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ದರಗಳು :

| ಕ್ರಮ ಸಂಖ್ಯೆ | ಪ್ರೋಗ್ರಾಂ | ಶುಲ್ಕ | |
|---|---|---|---|
| | | ಪ್ರತಿಯೊಂದು ಸೆಮಿಸ್ಟರ್/ ವಾರ್ಷಿಕ ಪೂರ್ಣ ಪರೀಕ್ಷೆಗೆ | ವಿಷಯವೊಂದಕ್ಕೆ |
| **ಕಲಾ ನಿಕಾಯ** | | | |
| 1. | **ಎಂ.ಎ.:** ಇಂಗ್ಲೀಷ್, ಕನ್ನಡ, ಸಂಸ್ಕೃತ, ಹಿಂದಿ, ಇತಿಹಾಸ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಸಮಾಜಶಾಸ್ತ್ರ, ಕೊಂಕಣಿ, ಕೊಡವ, ಇತಿಹಾಸ ಮತ್ತು ಪುರಾತತ್ವ ಶಾಸ್ತ್ರ *ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್* | ರೂ. 1,120.00 | ರೂ. 530.00 |
| 2. | **ಎಂ.ಎ.:** ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ, ಹಾಗೂ ಎಂ.ಎಸ್.ಡಬ್ಲ್ಯು. *ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್* | ರೂ. 1,710.00 | |
| **ವಾಣಿಜ್ಯ ನಿಕಾಯ** | | | |
| 1. | ಎಂ.ಕಾಂ., ಎಂ.ಕಾಂ.(ಹೆಚ್.ಆರ್.ಡಿ.), ಎಂ.ಕಾಂ.(ಇನ್ಸೂರೆನ್ಸ್ ಆ್ಯಂಡ್ ಬ್ಯಾಂಕ್ ಮ್ಯಾನೇಜ್‌ಮೆಂಟ್), *ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್* : | ರೂ.1,100.00/- | ರೂ.530.00 |
| 2. | ಎಂ.ಬಿ.ಎ.(ಐ.ಬಿ.), ಎಂ.ಕಾಂ.(ಐ.ಬಿ.) *ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್* : | ರೂ.2,130.00/- | |
| 3. | ಎಂ.ಬಿ.ಎ.(ಟಿ.ಟಿ.ಎಂ.), *ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್* : | ರೂ.1,710.00/- | |
| **ವಿಜ್ಞಾನ ನಿಕಾಯ** | | | |
| 1. | **ಎಂ.ಎಸ್ಸಿ.:** ಪ್ರಾಣಿಶಾಸ್ತ್ರ, ಸಸ್ಯಶಾಸ್ತ್ರ, ಜೀವವಿಜ್ಞಾನ, ರಸಾಯನಶಾಸ್ತ್ರ, ಅನ್ವಯಿಕ ರಸಾಯನಶಾಸ್ತ್ರ, ಸಾವಯವ ರಸಾಯನಶಾಸ್ತ್ರ, ಭೌತಶಾಸ್ತ್ರ, ಸಂಖ್ಯಾಶಾಸ್ತ್ರ, ವಸ್ತು ವಿಜ್ಞಾನ, ಯೋಗ ವಿಜ್ಞಾನ, ಜೀವರಸಾಯನಶಾಸ್ತ್ರ, ಸೂಕ್ಷ್ಮಾಣು ಜೀವವಿಜ್ಞಾನ, ಮನಃಶಾಸ್ತ್ರ, ಜಿಯೋಗ್ರಾಫಿ, ಪರಿಸರ ವಿಜ್ಞಾನ ಎಂ.ಎಲ್.ಐ.ಎಸ್ಸಿ., ಗಣಿತಶಾಸ್ತ್ರ, ಮೆಡಿಕಲ್ ಫಿಸಿಕ್ಸ್, ಸಾಗರ ಭೂವಿಜ್ಞಾನ, ಇಲೆಕ್ಟ್ರಾನಿಕ್ಸ್, ಸೈಬರ್ ಸೆಕ್ಯುರಿಟಿ, ಕೈಗಾರಿಕಾ | ರೂ. 1,710.00 | ರೂ. 530.00 |

| | | | |
|---|---|---|---|
| | ರಸಾಯನ ಶಾಸ್ತ್ರ, ಅನಾಲಿಟಿಕಲ್ ಕೆಮಿಸ್ಟ್ರಿ, ಕಂಪ್ಯೂಟರ್ ಸಾಯನ್ಸ್, *ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್* | | |
| 2. | ಎಂ.ಎಸ್ಸಿ.: ಜೀಯೋಇನ್‌ಫಾರ್ಮೆಟಿಕ್ಸ್ *ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್* | 2,130.00 | ರೂ.670.00 |
| 3. | ಎಂ.ಎಸ್ಸಿ.: ಬಯೋಟೆಕ್ನಾಲಜಿ *ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್ :* | ರೂ. 2,300.00 | ರೂ.670.00 |
| 4. | ಎಂ.ಎಸ್ಸಿ.: ಎಂ.ಎಸ್ಸಿ. ಫುಡ್ ಸೈನ್ಸ್ & ನ್ಯೂಟ್ರಿಷನ್ ಆಡಿಯೋಲಜಿ, ಸ್ಪೀಚ್ ಲ್ಯಾಂಗ್ವೇಜ್ ಪೆಥಾಲಜಿ ಎಂ.ಎ.ಎಸ್.ಎಲ್.ಪಿ. *ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್ :* | ರೂ. 2,860.00 | ರೂ.670.00 |
| **ಶಿಕ್ಷಣ ನಿಕಾಯ** | | | |
| 1. | ಎಂ.ಪಿ.ಎಡ್. *ಪ್ರಥಮ ಸೆಮಿಸ್ಟರ್ ಮತ್ತು ತೃತೀಯ ಸೆಮಿಸ್ಟರ್* | ರೂ. 1,710.00 | ರೂ. 530.00 |
| **ನಿಗದಿಪಡಿಸಿದ ಪರೀಕ್ಷಾ ಶುಲ್ಕದ ಜೊತೆಗೆ ಪ್ರತೀ ಪರೀಕ್ಷೆಗೆ ರೂ.230.00 ಅಂಕಪಟ್ಟಿ ಪ್ರೊಸೆಸಿಂಗ್ ಶುಲ್ಕ ಮತ್ತು ರೂ. 120.00 ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕಗಳನ್ನು ಪಾವತಿಸತಕ್ಕದ್ದು.** | | | |

* ವಿದ್ಯಾರ್ಥಿಗಳು ಪರೀಕ್ಷೆಯ ಯಾವುದಾದರೂ ಭಾಗ/ಭಾಗಗಳಿಗೆ ಪಾವತಿಸಲಿರುವ ಒಟ್ಟು ಪರೀಕ್ಷಾ ಶುಲ್ಕವು ನಿಗದಿತ ಪೂರ್ಣ ಪರೀಕ್ಷಾ ಶುಲ್ಕವನ್ನು ಮೀರಬಾರದು.

12. ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಕರ್ನಾಟಕ ರಾಜ್ಯದ ಅಭ್ಯರ್ಥಿಗಳು ಮಾತ್ರ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುತ್ತಾರೆ. ಸದ್ರಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಕಾಲೇಜು ಮುಖ್ಯಸ್ಥರು ಸಮಾಜ ಕಲ್ಯಾಣ ಇಲಾಖೆಯಿಂದ ಮರುಭರಣೆ ಪಡೆದು ಹಿಂದಿನ ವರ್ಷಗಳ ಶುಲ್ಕ ಬಾಕಿಯಿದ್ದಲ್ಲಿ ಅದನ್ನು ವಿಶ್ವವಿದ್ಯಾನಿಲಯ ನಿಧಿಗೆ ಜಮೆ ಮಾಡುವಂತೆ ತಿಳಿಸಲಾಗಿದೆ.

ಆ) ಪ್ರ. ವರ್ಗ-1 (ಆದಾಯ ಮಿತಿ ರೂ.2,50,000.00 ಮೀರದ) ಹಾಗೂ ಇತರೇ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ರೂ. 1,00,000.00ಕ್ಕಿಂತ ಕಡಿಮೆ ಇರುವ ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಪಾವತಿಸುವುದು. ತದನಂತರ ಕಾಲೇಜು ಪ್ರಾಂಶುಪಾಲರ ಮೂಲಕ ಸಂಬಂಧಪಟ್ಟ ಇಲಾಖೆಗೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ, ಬ್ಯಾಂಕ್ ಖಾತೆಗೆ ಜಮೆ ಮಾಡುವ ಬಗ್ಗೆ ಕ್ಲೇಮು ಸಲ್ಲಿಸುವುದು.

ಇ) ಪುನರಾವರ್ತಿತ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುವುದಿಲ್ಲ. ಆದರೆ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯುವ ವಿದ್ಯಾರ್ಥಿಗಳೂ ಸೇರಿದಂತೆ ಎಲ್ಲಾ ವಿದ್ಯಾರ್ಥಿಗಳು ರೂ. 230.00 ಅಂಕಪಟ್ಟಿ ಪ್ರೊಸೆಸಿಂಗ್ ಶುಲ್ಕ ಮತ್ತು ರೂ. 120.00 ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕವನ್ನು ಪಾವತಿಸತಕ್ಕದ್ದು.

ಈ) ವಿದೇಶಿ ಅಭ್ಯರ್ಥಿಗಳು ನಿಗದಿಪಡಿಸಿದ ಎಲ್ಲಾ ಶುಲ್ಕದ ಮೂರು ಪಟ್ಟು ಶುಲ್ಕವನ್ನು ಪಾವತಿಸತಕ್ಕದ್ದು.

13. UUCMS ಅಲ್ಲದ ಪುನರಾವರ್ತಿತ ವಿದ್ಯಾರ್ಥಿಗಳಿಂದ ಪಡೆದ ಶುಲ್ಕವನ್ನು ಈ ಕೆಳಗಿನ ಕೋಡ್ ಸಂಖ್ಯೆಗಳಲ್ಲಿ ಬ್ಯಾಂಕ್ ಚಲನ್ ಮುಖಾಂತರ ಮಂಗಳೂರು ವಿಶ್ವವಿದ್ಯಾನಿಲಯ ನಿಧಿಗೆ ಪಾವತಿಸತಕ್ಕದ್ದು.

ಅ) ಅರ್ಜಿ ಶುಲ್ಕ ... 008/14
ಆ) ಪರೀಕ್ಷಾ ಶುಲ್ಕ ... 008/23
ಇ) ಅಂಕಪಟ್ಟಿ ಶುಲ್ಕ ... 008/24

**14. ಕೆಳಗೆ ನಮೂದಿಸಿರುವ ತಖ್ತೆಗಳನ್ನು ಮತ್ತು ದಾಖಲೆ ಪತ್ರಗಳನ್ನು ಈ ಕಛೇರಿಗೆ ದಿನಾಂಕ: *31.01.2024ರ* ಒಳಗಾಗಿ ತಪ್ಪದೇ ಕಳುಹಿಸಿಕೊಡುವುದು.**

ಅ) ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಪಟ್ಟಿ

ಆ) ಪುನರಾವರ್ತಿತ ವಿದ್ಯಾರ್ಥಿಗಳ (MU-VARSITY) ಕ್ರೋಢೀಕೃತ ಪರೀಕ್ಷಾ ಶುಲ್ಕವನ್ನು ಪಾವತಿಸಿದ ಚಲನ್ ಅಥವಾ ಡಿ.ಡಿ.

ಇ) ಹಣಕಾಸು ತ:ಖ್ತೆ - ಆನ್‌ಲೈನ್ ಪ್ರಿಂಟ್

ಈ) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ನೀಡಲಾದ ಶುಲ್ಕ ವಿನಾಯಿತಿ ತ:ಖ್ತೆ. ಅಂತಹ ಯಾವುದೇ ಬೇಡಿಕೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ತಪ್ಪದೆ ಕಳುಹಿಸಿಕೊಡಬೇಕು.

**15. ಆಂತರಿಕ ಮೌಲ್ಯಮಾಪನದ ಅಂಕಗಳನ್ನು ಆನ್‌ಲೈನ್ ಮುಖಾಂತರ ಸಲ್ಲಿಸಿ, ಅಂತಿಮ ಆನ್‌ಲೈನ್ ಪ್ರಿಂಟಿಂಗ್ ಪ್ರತಿಗಳನ್ನು ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ 8 ದಿನಗಳ ಮುಂಚಿತವಾಗಿ ಈ ಕಛೇರಿಗೆ ತಪ್ಪದೆ ಸಲ್ಲಿಸಲು ತಿಳಿಸಲಾಗಿದೆ.**

16. ಲಗತ್ತಿಸಲಾದ ನಮೂನೆಯಲ್ಲಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ವಿವರವನ್ನು ಭರ್ತಿ ಮಾಡಿ ತಪ್ಪದೆ ಈ ಕಛೇರಿಗೆ ಕಳುಹಿಸಿಕೊಡತಕ್ಕದ್ದು.

17. **UUCMS portal ನಡಿಯಲ್ಲಿ ಪರೀಕ್ಷೆಗೆ ಹಾಜರಾಗುವ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಪರೀಕ್ಷಾ ಶುಲ್ಕವನ್ನು Online ಮೂಲಕವೇ ಪಾವತಿಸತಕ್ಕದ್ದು. ಇಲ್ಲವಾದಲ್ಲಿ ಫಲಿತಾಂಶ ಪ್ರಕಟಿಸಲು ಸಾಧ್ಯವಾಗುವುದಿಲ್ಲ. ಇದರ ಬಗ್ಗೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು/ಸಂಯೋಜಕರು/ಕಾಲೇಜುಗಳ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.**

ಕುಲಸಚಿವರು (ಪರೀಕ್ಷಾಂಗ)

**ಗೆ:** ಸಂಬಂಧಪಟ್ಟ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರು/ಸ್ನಾತಕೋತ್ತರ ಕಾರ್ಯಕ್ರಮ ಹೊಂದಿರುವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ, ಸೂಚನಾಫಲಕದಲ್ಲಿ ಪ್ರಕಟಿಸುವಂತೆ ತಿಳಿಸಲಾಗಿದೆ.

**ಪ್ರತಿ:**

1. ಡೀನರು, ಕಲೆ, ವಾಣಿಜ್ಯ, ವಿಜ್ಞಾನ ಮತ್ತು ಶಿಕ್ಷಣ ನಿಕಾಯಗಳು, ಮಂಗಳೂರು ವಿಶ್ವವಿದ್ಯಾನಿಲಯ.
2. ಕುಲಸಚಿವರು (ಮೌಲ್ಯಮಾಪನ) ಬೆಂಗಳೂರು / ಕರ್ನಾಟಕ / ಮೈಸೂರು / ಗುಲ್ಬರ್ಗಾ / ಕುವೆಂಪು ವಿಶ್ವವಿದ್ಯಾನಿಲಯ.
3. ಕುಲಸಚಿವರು/ಹಣಕಾಸು ಅಧಿಕಾರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
4. ಪ್ರೊ. ಹೆಚ್.ಎಲ್. ಶಶಿರೇಖಾ, ಸಂಯೋಜಕರು, UUCMS Portal, ಗಣಕ ವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
5. ಕುಲಪತಿಯವರ ಆಪ್ತ ಕಾರ್ಯದರ್ಶಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
6. ವಿಶೇಷಾಧಿಕಾರಿ, ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಘಟಕ, ಮಂಗಳೂರು ವಿಶ್ವವಿದ್ಯಾನಿಲಯ
7. ಉಪಕುಲಸಚಿವರು, ಕುಲಸಚಿವರು (ಪರೀಕ್ಷಾಂಗ)ರ ಕಛೇರಿ ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
8. ನೋಡಲ್ ಅಧಿಕಾರಿ, UUCMS Portal, ಗಣಕ ಯಂತ್ರ ವಿಭಾಗ, ಕುಲಸಚಿವರು (ಪರೀಕ್ಷಾಂಗ)ರ ಕಚೇರಿ ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
9. ಸಹಾಯಕ ಕುಲಸಚಿವರು (ಪರೀಕ್ಷಾಂಗ) 1 & 2, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
10. ಎಲ್ಲಾ ಅಧೀಕ್ಷಕರು, ಪರೀಕ್ಷಾಂಗ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
11. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ವಿಶ್ವವಿದ್ಯಾನಿಲಯ, ಕಾಲೇಜು ಆವರಣ, ಮಂಗಳೂರು 1.
12. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಜಿಲ್ಲಾಧಿಕಾರಿ ಆಫೀಸಿನ ಬಳಿ, ಮಂಗಳೂರು.
13. ಆಪ್ತ ಸಹಾಯಕರು, ಕುಲಸಚಿವರು (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
14. ಇ.9/ಇ.11 ವಿಷಯ ನಿರ್ವಾಹಕರು/ಕಂಪ್ಯೂಟರ್ ವಿಭಾಗಕ್ಕೆ ಮಾಹಿತಿಗಾಗಿ

FEES COLLECTED STATEMENT OF FEBRUARY 2024 EXAMINATION – COURSE

| Name of the Course | Dept. /College | Fees per Candidate | | I SEMESTER | | | | | III SEMESER | | | | | Total Fees collected |
|---|---|---|---|---|---|---|---|---|---|---|---|---|---|---|
| | | General | SC/ST | General | SC/ST | Rep. | Total Students | Fees Collected | General | SC/ST | Rep. | Total Students | Fees Collected | |
| | | | | | | | | | | | | | | |
| | | | | | | | | | | | | | | |
| | | | | | | | | | | | | | | |
| | | | | | | | | | | | | | | |